**ಶ್ರೀ. ಸಿ.ಟಿ.ರವಿ**
**(ಮಾನ್ಯ ಉನ್ನತ ಶಿಕ್ಷಣ ಸಚಿವರು)**

ಅ) ಬಂದಿದೆ.

ಆ) ನಿವೇಶನದ ಮೌಲ್ಯ ಹಾಗೂ ಇತರೆ ಬಾಕಿಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಪಾವತಿಸಿದ್ದು, ಕಾಲೇಜು ಶಿಕ್ಷಣ ಇಲಾಖೆಯ ಹೆಸರಿಗೆ ನಿವೇಶನ ಇನ್ನೂ ನೋಂದಣಿಯಾಗದ ಕಾರಣ ಕಾಮಗಾರಿ ಪ್ರಾರಂಭಿಸಿರುವುದಿಲ್ಲ.

ಇ) ಇಲಾಖೆಯ ಹೆಸರಿಗೆ ನಿವೇಶನ ನೋಂದಣಿಯಾದ ನಂತರ ಶೀಘ್ರವಾಗಿ ಕಾಮಗಾರಿ ಪ್ರಾರಂಭಿಸಲಾಗುವುದು. ಟೆಂಡರ್ ಪ್ರಕ್ರಿಯೆ ಪ್ರಾರಂಭವಾಗಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

**ಸ್ನಾತಕೋತ್ತರ ಹಾಗೂ ವೃತ್ತಿಪರ ಶಿಕ್ಷಣ**
**305 : 309**
**ಶ್ರೀ ಲಾಲಾಜಿ ಆರ್.ಮೆಂಡನ್**

ಅ) ಉಡುಪಿ ಜಿಲ್ಲೆಯ ಕಾಪು ಹಾಗೂ ಹಿರಿಯಡ್ಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಉದ್ಘಾಟನೆಯಾಗಿದ್ದರೂ ಕುಡಿಯುವ ನೀರಿನ ಬಾವಿ,ವಾಹನ ನಿಲುಗಡೆ ಪ್ರದೇಶಕ್ಕೆ ತಂಗುದಾಣ, ಆವರಣ ಗೋಡೆ ಇತ್ಯಾದಿ ಮೂಲಭೂತ ಸೌಲಭ್ಯದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;ಹಾಗಿದಲ್ಲಿ, ಈ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

ಆ) ಸ್ನಾತಕೋತ್ತರ ಪದವಿ ಕಾಲೇಜು ಹಾಗೂ ವೃತ್ತಿಪರ ಶಿಕ್ಷಣಕ್ಕೆ ಆದ್ಯತೆ ನೀಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳ ವಿವರ ನೀಡುವುದು;

**ಶ್ರೀ. ಸಿ.ಟಿ.ರವಿ**
**(ಮಾನ್ಯ ಉನ್ನತ ಶಿಕ್ಷಣ ಸಚಿವರು)**

ಅ) ಬಂದಿದೆ. ಕಾಪು ಕಾಲೇಜಿನಲ್ಲಿ ಶೌಚಾಲಯ ನಿರ್ಮಾಣಕ್ಕಾಗಿ ರೂ.5.00 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದೆ. ಹಿರಿಯಡ್ಕ ಕಾಲೇಜಿಗೆ ಹೆಚ್ಚುವರಿ ಕೊಠಡಿ ನಿರ್ಮಾಣಕ್ಕಾಗಿ ರೂ.100.00 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದೆ. ಇನ್ನಿತರ ಮೂಲ ಸೌಕರ್ಯಗಳಿಗಾಗಿ ಅನುದಾನದ ಲಭ್ಯತೆಯನ್ನಾಧರಿಸಿ ಹಂತ ಹಂತವಾಗಿ ಅನುದಾನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಆ) 359 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪೈಕಿ 71 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 226 ವಿವಿಧ ಸ್ನಾತಕೋತ್ತರ ಕೋರ್ಸುಗಳನ್ನು ಪ್ರಾರಂಭಿಸಲಾಗಿದೆ. ಸರ್ಕಾರಿ ಪದವಿ ಕಾಲೇಜುಗಳ ವಿದ್ಯಾರ್ಥಿಗಳಿಗಾಗಿ ಮೃದು ಕೌಶಲ್ಯ ಯೋಜನೆಯಡಿ ಪ್ರಥಮ ಪದವಿ ತರಗತಿಗಳ ವಿದ್ಯಾರ್ಥಿಗಳಿಗೆ ಆಂಗ್ಲ, ದ್ವಿತೀಯ ಪದವಿ ತರಗತಿಗಳ ವಿದ್ಯಾರ್ಥಿಗಳಿಗೆ ವಿಕಸನ ಮತ್ತು ಅಂತಿಮ ಪದವಿ ತರಗತಿಗಳ ವಿದ್ಯಾರ್ಥಿಗಳಿಗೆ ಸಹಯೋಗ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಸಹಯೋಗ ಕಾರ್ಯಕ್ರಮದಡಿ ತರಬೇತಿ ಪಡೆದ ವಿದ್ಯಾರ್ಥಿಗಳಲ್ಲಿ 11000 ವಿದ್ಯಾರ್ಥಿಗಳು ಉದ್ಯೋಗಾವಕಾಶವನ್ನು ಪಡೆದಿರುತ್ತಾರೆ.

**ಪಶುಸಂಗೋಪನೆ ಇಲಾಖೆಯ ಯೋಜನೆಗಳು**

**273 : (377)**

**ಶ್ರೀ ಅಮರೇಶ್**

**ಮುಳಬಾಗಿಲು ವಿಧಾನ ಸಭಾ ಕ್ಷೇತ್ರ**

ಅ) ಕಳೆದ ಮೂರು ವರ್ಷಗಳಿಂದ ಕೋಲಾರ ಜಿಲ್ಲೆಯಲ್ಲಿ ಪಶು ಸಂಗೋಪನಾ ಇಲಾಖೆ ವತಿಯಿಂದ ಅನುಷ್ಠಾನಗೊಂಡ ಯೋಜನೆಗಳು ಯಾವುವು;

[ವಿವರ ನೀಡುವುದು];

ಆ) ಈ ಯೋಜನೆಗಳಿಗೆ ಕಳೆದ ಮೂರು ವರ್ಷಗಳಲ್ಲಿ ಸರ್ಕಾರ ನಿಗದಿಪಡಿಸಿದ ಅನುದಾನದ ಮೊತ್ತವೆಷ್ಟು; [ವಿವರ ನೀಡುವುದು];

ಇ) ಈ ಇಲಾಖೆಯ ಎಲ್ಲಾ ಯೋಜನೆಗಳಿಗೆ ಬಿಡುಗಡೆ ಮಾಡಿ ವೆಚ್ಚ ಮಾಡಿರುವ ಮೊತ್ತವೆಷ್ಟು? [ತಾಲ್ಲೂಕುವಾರು / ಯೋಜನೆವಾರು ವಿವರ ನೀಡುವುದು].

**ಶ್ರೀ ರೇವೂನಾಯಕ್ ಬೆಳಮಗಿ**

**(ಲೋಕಾ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು)**

ಅ) ವಿವರಗಳನ್ನು **ಅನುಬಂಧ–1** ರಲ್ಲಿ ನೀಡಿದೆ.

ಆ) ಯೋಜನೆಗಳಿಗೆ ಕಳೆದ ಮೂರು ವರ್ಷಗಳಲ್ಲಿ ಸರ್ಕಾರ ನಿಗದಿಪಡಿಸಿದ ಅನುದಾನದ ಮೊತ್ತದ ವಿವರಗಳು ಈ ಕೆಳಕಂಡಂತೆ ಇರುತ್ತವೆ: